333 (330) ಶ್ರೀ ಧ್ರುವನಾರಾಯಣ್ ಆರ್ (ಸಂತೇಮರಳ್ಳಿ) : ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನಕ್ಸಲ್‌ರ ಹಾವಳಿ ಇರುವ ಜಿಲ್ಲೆಗಳಾವುವು;

ಆ) ನಕ್ಷಲರ ಹಾವಳಿಯನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಇ) ನಕ್ಸಲರ ಹಾವಳಿ ಇರುವ ಜಿಲ್ಲೆಗಳಲ್ಲಿ ಇದಕ್ಕಾಗಿ ನಿಗಧಿಪಡಿಸಿರುವ ಅನುದಾನವೆಷ್ಟು; ಈ ಅನುದಾನವನ್ನು ಯಾವ ಕಾರ್ಯಕ್ರಮಕ್ಕಾಗಿ ನಿಗಧಿಪಡಿಸಿದೆ;

ಈ) ನಕ್ಸಲ್ ಸಂಘಟನೆಯಲ್ಲಿ ವಿದ್ಯಾವಂತ ನಿರುದ್ಯೋಗಿಗಳು ತೊಡಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಇನ್ನು ಮುಂದೆ ವಿದ್ಯಾವಂತ ನಿರುದ್ಯೋಗಿಗಳು ಈ ಸಂಘಟನೆಗೆ ಸೇರದಂತೆ ಮಾಡಲು ರಾಜ್ಯದಲ್ಲಿ ಅದರಲ್ಲೂ ಮುಖ್ಯವಾಗಿ ಹಿಂದುಳಿದ ಜಿಲ್ಲೆಗಳಲ್ಲಿ ನಿರುದ್ಯೋಗಿ ಯುವಕ/ಯುವತಿಯರಿಗೆ ಉದ್ಯೋಗದ ಅವಕಾಶ ಕಲ್ಪಿಸಲು ಸರ್ಕಾರ ಮುಂದೆ ಬರುವುದೆ?

ಶ್ರೀ ಎಂ.ಪಿ. ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):

ಅ) ರಾಜ್ಯದಲ್ಲಿ ತುಮಕೂರು, ಕೋಲಾರ, ಚಿಕ್ಕಮಗಳೂರು, ಉಡುಪಿ ದಕ್ಷಿಣ ಕನ್ನಡ, ಬಳ್ಳಾರಿ, ಬೀದರ್, ಚಿತ್ರದುರ್ಗ, ಶಿವಮೊಗ್ಗ, ಗುಲ್ಬರ್ಗಾ, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳು ನಕ್ಸಲ್ ಪೀಡಿತ ಜಿಲ್ಲೆಗಳಾಗಿವೆ.

ಆ) ರಾಜ್ಯದಲ್ಲಿ ನಕ್ಸಲ್ ಹಾವಳಿಯನ್ನು ತಡೆಗಟ್ಟಲು ಸರ್ಕಾರವು ಎ.ಎನ್.ಎಫ್. ದಳವನ್ನು ರಚಿಸಿರುತ್ತದೆ. ಪ್ರಸ್ತುತ ಪ್ರಮುಖ ನಕ್ಸಲ್ ಪೀಡಿತ ಜಿಲ್ಲೆಗಳಲ್ಲಿ ಪೊಲೀಸ್ ಅಧೀಕ್ಷಕರ ಅಧೀನದಲ್ಲಿ ಎ.ಎಸ್.ಎಫ್.ತುಕಡಿಗಳನ್ನು ರಚಿಸಿ ಕಾರ್ಯಾಚರಣೆಗೆ ಕೊಡಲಾಗಿದೆ.

ಇ) ನಕ್ಸಲ್ ಭಾದಿತ ಜಿಲ್ಲೆಗಳಿಗೆ 2005–06ನೇ ಸಾಲಿನಲ್ಲಿ ಹಾಗೂ 2006–07ನೇ ಸಾಲಿನಲ್ಲಿ ನಿಗಧಿಪಡಿಸಲಾದ ಅನುದಾನದ ವಿವರವನ್ನು ಈ ಕೆಳಕಂಡಂತಿದೆ.

(ರೂ. ಕೋಟಿಗಳಲ್ಲಿ)

ಕ್ರ.ಸಂ	ವರ್ಷ	ನಿಗದಿಪಡಿಸಲಾದ ಅನುದಾನ
1	2005–06	8.00
2	2006–07	15.20

ಈ ಅನುದಾನವನ್ನು ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ತೆಗೆದುಕೊಳ್ಳುವ ಸಲುವಾಗಿ ನಿಗದಿ ಪಡಿಸಿದೆ.

ಈ) ಹೌದು

ಉ) ವಿದ್ಯಾವಂತ ನಿರುದ್ಯೋಗಿಗಳು ಈ ಸಂಘಟನೆಗೆ ಸೇರದಂತೆ ಮಾಡಲು ಕರ್ನಾಟಕ ರಾಜ್ಯ ಪೊಲೀಸ್ ಹೌಸಿಂಗ್ ಕಾರ್ಪೊರೇಷನ್ ವತಿಯಿಂದ ಮಲೆನಾಡು ಪ್ರದೇಶದ ಬುಡಕಟ್ಟು ಯುವಕರಿಗೆ ವೃತ್ತಿಪರ ತರಬೇತಿಯನ್ನು ಆಗುಂಬೆಯಲ್ಲಿ ಕೊಡಲಾಗುತ್ತಿದೆ. 2004 ರಿಂದ '2007 (ಜನವರಿ) ರವರೆಗೆ 240 ನಿರುದ್ಯೋಗಿ ಯುವಕರಿಗೆ ವೃತ್ತಿಪರ ತರಬೇತಿ ಕೊಡಲಾಗಿದೆ.

ಈ ಸಂಬಂಧ ವಿವರಗಳುಳ್ಳ ಟಿಪ್ಪಣಿಯನ್ನು ಲಗತ್ತಿಸಿದೆ.

364 (648) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಮೆಟ್ರೋ ರೈಲು ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಈ ಯೋಜನೆಯ ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು;

ಇ) ಈ ಯೋಜನೆಯಿಂದ ನಿರ್ವಸಿತರಾಗುವವರಿಗೆ ಯಾವ ಆಧಾರದ ಮೇಲೆ ಪರಿಹಾರ ಧನ ನಿರ್ಧರಿಸಲಾಗುವುದು ಹಾಗೂ ಇದಕ್ಕಾಗಿ ನಿಗದಿಪಡಿಸಲಾಗಿರುವ ಅನುದಾನ ಎಷ್ಟು;

ಈ) ಈ ಯೋಜನೆ ಅನುಷ್ಠಾನಕ್ಕಾಗಿ ಇಲ್ಲಿಯವರೆಗೆ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಹಾಗೂ ವಿತರಿಸಲಾಗಿರುವ ಪರಿಹಾರದ ಮೊತ್ತ ಎಷ್ಟು;

ಉ) ಈ ಯೋಜನೆಯ ಭೂಸ್ವಾಧೀನದ ಬಗ್ಗೆ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿವೆಯೇ;